ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

**ಪಟ್ಟಿ–೧೬**

# ಕರ್ನಾಟಕ ವಿಧಾನ ಪರಿಷತ್ತು

## ನೂರ ಇಪ್ಪತ್ತೈದನೆಯ ಅಧಿವೇಶನ

## ಸೋಮವಾರ, ದಿನಾಂಕ: ೧೪ನೇ ಜುಲೈ ೨೦೧೪

---

**ಸಮೂಹ – I**

೧. ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು

೨. ಸಾರಿಗೆ ಸಚಿವರು

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೪. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

೫. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು

೬. ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು

---

## ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಉತ್ತರ ಕರ್ನಾಟಕ

## ನೌಕರರ ಬೇಡಿಕೆಗಳ ಬಗ್ಗೆ

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೨೨೬ (೧೨೯೪) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ಮತ್ತು ಉತ್ತರ ಕರ್ನಾಟಕ ನೌಕರರ ಕ್ಷೇಮಾಭಿವೃದ್ಧಿ ಸಂಘವು ಸರಕಾರಕ್ಕೆ ಕೆಲ ಬೇಡಿಕೆಗಳ ಬಗ್ಗೆ ಮನವಿ ಸಲ್ಲಿಸಿದ್ದು ನಿಜವೇ ; ಸಲ್ಲಿಸಿದ್ದರೆ, ಅವರ ಬೇಡಿಕೆಗಳೇನು ;

(ಆ) ಅವರು ೧೬ ಬೇಡಿಕೆಗಳನ್ನು ಸಲ್ಲಿಸಿ ನಾಲ್ಕಾರು ತಿಂಗಳುಗಳು ಕಳೆದರೂ ಸರಕಾರ ಸ್ಪಂದಿಸದಿರಲು ಕಾರಣವೇನು ;

(ಇ) ಈಗಲಾದರೂ ಸಗಕಾರ ಅವರ ಬೇಡಿಕೆಗಳನ್ನು ತಕ್ಷಣ ಪರಿಹರಿಸುವುದೆ ?

## ಭಾಗ್ಯಲಕ್ಷ್ಮಿ ಬಾಂಡ್ ವಿತರಣೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೨೨೭. (೧೩೦೩) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಬಾಕಿ ಇರುವ ಭಾಗ್ಯಲಕ್ಷ್ಮಿ ಬಾಂಡ್ ವಿತರಣೆ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಆಯಾ ಖಾತೆಗಳಲ್ಲಿ ಹಣವಿದ್ದೂ, ಸಂಬಂಧಪಟ್ಟ ಸ್ಥಳಗಳಲ್ಲಿ ಅರ್ಹ ಫಲಾನುಭವಿಗಳಿದ್ದೂ, ಆಯಾ ಅಧಿಕಾರಿಗಳಿಂದ ವಿತರಣೆ ಮಾಡದೆ ಇರುವ ಸಂಖ್ಯೆ ಎಷ್ಟು ; ಹಣವಿದ್ದೂ ಈ ರೀತಿ ವಿಳಂಬವಾಗಲು ಕಾರಣವೇನು ?

## ಮಧುಮೇಹ ಚಿಕಿತ್ಸಾ ಆಸ್ಪತ್ರೆ ನಿರ್ಮಾಣ

**ಡಾ॥ ಮತ್ತಿಕಟ್ಟೆ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೨೨೮ (೧೨೭೦) ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮಧುಮೇಹ ರೋಗಿಗಳ ಸಂಖ್ಯೆ ದಿನೇ ದಿನೇ ಹೆಚ್ಚುತ್ತಿದ್ದು, ವೈದ್ಯಕೀಯ ಸೌಲಭ್ಯಗಳ ತೀವ್ರ ಕೊರತೆಯಿಂದ ರೋಗಿಗಳು ತೊಂದರೆಗಳನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಕೇವಲ ಹೊರರೋಗಿಗಳ ತಪಾಸಣೆಗೆ ಮಾತ್ರ ಸೀಮಿತಗೊಂಡಿರುವ ಕರ್ನಾಟಕ ಮಧುಮೇಹ ಸಂಸ್ಥೆಯನ್ನು ಒಳರೋಗಿಗಳಿಗೆ ಎಲ್ಲಾ ಚಿಕಿತ್ಸೆಗಳನ್ನು ನೀಡುವಂತಹ ಮಟ್ಟಕ್ಕೆ ಯಾವಾಗ ಉನ್ನತೀಕರಿಸಲಾಗುವುದು ;

(ಇ) ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಸರ್ಕಾರವು ಯಾವ ಕಾಲಬದ್ಧ ಯೋಜನೆಯನ್ನು ರೂಪಿಸಿದೆ ; ಯಾವಾಗ ಸ್ವಾಯತ್ತ ಸಮಗ್ರ ಮಧುಮೇಹ ಚಿಕಿತ್ಸಾ ಆಸ್ಪತ್ರೆಯನ್ನು ಸ್ಥಾಪಿಸಲಾಗುವುದು ?

## ಡಾ: ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಲ್ಲಿ ಹೊರಗುತ್ತಿಗೆ ನೌಕರರು

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) –**

೨೨೯ (೧೨೬೯) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :--

(ಅ) ಡಾ: ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಲ್ಲಿ ಹೊರಗುತ್ತಿಗೆ (Outsources) ಆಧಾರದ ಮೇಲೆ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿ ಸ್ವಯಂ ಉದ್ಯೋಗ ಯೋಜನೆಯಡಿ ಯಾರ್ಯಾರು, ಯಾವ ಯಾವ ಉದ್ದೇಶಕ್ಕೆ ಸಾಲ–ಸೌಲಭ್ಯಗಳನ್ನು ಪಡೆದಿದ್ದಾರೆ ; (ವಿವರಗಳನ್ನು ನೀಡುವುದು)

(ಆ) ಸಾಲ–ಸೌಲಭ್ಯ ಹೊಂದಿ ಘಟಕಗಳು ನಡೆಯುತ್ತಿರುವ ಬಗ್ಗೆ ಪರಿಶೀಲನೆ ಮಾಡಲಾಗಿದೆಯೇ ; ಹಾಗಿದ್ದಲ್ಲಿ, ಪರಿಶೀಲನಾ ವಿವರಗಳನ್ನು ನೀಡುವುದು ;

(ಇ) ಸ್ವಯಂ ಉದ್ಯೋಗ ಯೋಜನೆಯಡಿ ಫಲಾನುಭವಿಗಳಾಗಿ ಸಾಲ–ಸೌಲಭ್ಯ ಪಡೆಯಲು ನಿಗದಿಪಡಿಸಿದ ಆದಾಯದ ಮಿತಿ ಎಷ್ಟು ; ಸಾಲ–ಸೌಲಭ್ಯ ಪಡೆದ ಹೊರಗುತ್ತಿಗೆ ನೌಕರರ ಆದಾಯವೆಷ್ಟು ; ಆದಾಯ ಮಿತಿಗಿಂತ ಹೆಚ್ಚಿನ ಆದಾಯ ಹೊಂದಿ ಯಾರ್ಯಾರು ಸಾಲ–ಸೌಲಭ್ಯಗಳನ್ನು ಪಡೆದಿದ್ದಾರೆ ;

(ಈ) ಸ್ವಯಂ ಉದ್ಯೋಗ ಯೋಜನೆಯಡಿ ಸಾಲ ಪಡೆಯಲು ನಿಗದಿಪಡಿಸಿದ ಆದಾಯದ ಮಿತಿಗಿಂತಲೂ ಹೆಚ್ಚಿನ ಸಂಬಳದ ಆದಾಯ ಹೊಂದಿದ್ದರೂ ಖೊಟ್ಟಿ ಆದಾಯ ಪ್ರಮಾಣ ಪತ್ರವನ್ನು ನೀಡಿ ಸಾಲ–ಸೌಲಭ್ಯ ಪಡೆದಿರುವವರ್ಯಾರು ; ಇವರ ವಿರುದ್ಧ ಕೈಗೊಂಡಿರುವ ಕ್ರಮಗಳೇನು ;

(ಉ) ನಿಗಮದಲ್ಲಿ ಅವಶ್ಯಕತೆಗಿಂತ ಹೆಚ್ಚು ಹೊರಗುತ್ತಿಗೆ ಸಿಬ್ಬಂದಿಯನ್ನು ನೇಮಿಸಿಕೊಂಡಿರುವುದು ನಿಜವೇ, ಈ ಬಗ್ಗೆ ಆಂತರಿಕ ಲೆಕ್ಕ ಪರಿಶೋಧನಾ (Audit) ವರದಿಯಲ್ಲಿ ಆಕ್ಷೇಪಣೆ ವ್ಯಕ್ತಪಡಿಸಿದ್ದು, ಅವರನ್ನು ನಿಗಮದಿಂದ ಕೈಬಿಡಲು ಕೈಗೊಂಡಿರುವ ಕ್ರಮಗಳೇನು ;

(ಊ) ಹೊರಗುತ್ತಿಗೆ ಸಿಬ್ಬಂದಿಗಳಿಗೆ ನಿಗಮದ ಜವಾಬ್ದಾರಿಯುತ ಹುದ್ದೆಗಳ ಕೆಲಸ ನಿರ್ವಹಿಸಲು ಸೂಚಿಸಿ ಕರ್ತವ್ಯ ನಿರ್ವಹಿಸುವಲ್ಲಿ ಲೋಪ ಕಂಡು ಬಂದರೆ ಖಾಯಂ ನೌಕರರಲ್ಲದ ಅವರನ್ನು ಹೇಗೆ ಹೊಣೆಗಾರರನ್ನಾಗಿ ಮಾಡಲು ಸಾಧ್ಯ ಎಂಬ ವಿವರ ನೀಡುವುದು ;

(ಋ) ಹೊರಗುತ್ತಿಗೆ ನೌಕರರು ನಿಗಮದ ಯೋಜನೆಗಳಲ್ಲಿ ಫಲಾನುಭವಿಗಳಾಗಿ ಸಾಲ–ಸೌಲಭ್ಯಗಳನ್ನು ಪಡೆದು ಜೀವನ ನಿರ್ವಹಣೆ ಸುಗಮವಾದ ನಂತರವೂ ನಿಗಮದಲ್ಲಿ ಹೊರಗುತ್ತಿಗೆ ನೌಕರರಾಗಿ ಕೆಲಸ ನಿರ್ವಹಿಸುವುದು ಸಮಂಜಸವೇ ; ನಿಗಮದ ನೌಕರರೇ ಸಾಲ–ಸೌಲಭ್ಯಗಳನ್ನು ಪಡೆದರೆ ಇತರ ಫಲಾನುಭವಿಗಳಿಗೆ ಅನ್ಯಾಯವಾಗುವುದಿಲ್ಲವೇ ; ಇಂತಹವುಗಳನ್ನು ತಡೆಗಟ್ಟಲು ಈಗಾಗಲೇ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ವಿದ್ಯಾರ್ಥಿ ವೇತನ

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೨೩೦ (೧೨೮೮) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಿಂದ ಸಮಾಜ ಕಲ್ಯಾಣ ಇಲಾಖಾ ವತಿಯಿಂದ ಪಾವತಿಸಲಾದ ವಿದ್ಯಾರ್ಥಿ ವೇತನ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಪಾವತಿಸದಿದ್ದಲ್ಲಿ, ವಿಳಂಬಕ್ಕೆ ಕಾರಣಗಳೇನು ? (ವಿವರ ನೀಡುವುದು)

## ಮೊರಾರ್ಜಿ ಶಾಲೆಯ ಶಿಕ್ಷಕರು

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೨೩೧ (೧೨೬೬) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಮೊರಾರ್ಜಿ ಶಾಲೆಗಳಲ್ಲಿ ಹೊರಗುತ್ತಿಗೆ ಆಧಾರದಲ್ಲಿ ಕೆಲಸ ಮಾಡುತ್ತಿದ್ದು, ಕೋರ್ಟ್ ಆದೇಶದಿಂದ ಸೇವೆಯಲ್ಲಿ ಮುಂದುವರೆಯುತ್ತಿರುವ ಶಿಕ್ಷಕರುಗಳ ಸೇವಾ ಸಕ್ರಮಾತಿಗೆ ಸರ್ಕಾರ ಏನು ಕ್ರಮ ಕೈಗೊಂಡಿದೆ ;

(ಆ) ಈ ಕುರಿತಾಗಿ ಕೋರ್ಟ್ ನೀಡಿದ ನಿರ್ದೇಶನಗಳೇನು ;

(ಇ) ಕೋರ್ಟ್ ನಿರ್ದೇಶನಗಳನ್ನು ಎಂದು ಅನುಷ್ಠಾನಗೊಳಿಸಲಾಗುತ್ತದೆ ;

(ಈ) ಈ ಶಿಕ್ಷಕರುಗಳಿಗೆ ಸಂಬಳ ನೀಡಲು ವಿಳಂಬವಾಗುತ್ತಿರುವ ಕಾರಣಗಳೇನು ?

## ಹಾವೇರಿ ಆಸ್ಪತ್ರೆಗಳು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) –**

೨೩೨ (೧೨೭೫) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಆಸ್ಪತ್ರೆಗಳು ಎಷ್ಟು ; ಅವುಗಳು ಯಾವ ಯಾವ ಗ್ರಾಮಗಳಲ್ಲಿ ಕಾರ್ಯನಿರ್ವಹಿಸುತ್ತಿವೆ ; ಎಷ್ಟು ವಿಸ್ತೀರ್ಣವನ್ನು ಹೊಂದಿವೆ ; ಅಲ್ಲಿ ಪ್ರತಿ ದಿನ ಬರುವ ಒಳ ಮತ್ತು ಹೊರ ರೋಗಿಗಳ ಸರಾಸರಿ ಸಂಖ್ಯೆ ಎಷ್ಟು ; (ಆಸ್ಪತ್ರೆವಾರು ಮಾಹಿತಿ ನೀಡುವುದು)

(ಆ) ಅವು ಎಲ್ಲಿ ಕಾರ್ಯನಿರ್ವಹಿಸುತ್ತಿವೆ ; (ಸ್ವಂತ ಕಟ್ಟಡದಲ್ಲಿ ಅಥವಾ ಬಾಡಿಗೆ ಕಟ್ಟಡದಲ್ಲಿ) ಸದರಿ ಕಟ್ಟಡಗಳು ಶಿಥಿಲಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅವುಗಳ ಅಭಿವೃದ್ಧಿ ಬಗ್ಗೆ ಪ್ರಸ್ತಾವನೆಯನ್ನು ಸಿದ್ಧಪಡಿಸಲಾಗಿದೆಯೇ ; ದುರಸ್ತಿ ಕಾಮಗಾರಿಯನ್ನು ಯಾವ ಸಾಲಿನಲ್ಲಿ ಆರಂಭಗೊಳಿಸಲಾಗುವುದು ;

(ಇ) ಜಿಲ್ಲೆಯ ವ್ಯಾಪ್ತಿಯಲ್ಲಿರುವ ಆಸ್ಪತ್ರೆಗಳನ್ನು ಮೇಲ್ದರ್ಜೆಗೇರಿಸುವ ಕುರಿತು ಸರ್ಕಾರವು ಯೋಜನೆಗಳನ್ನೇನಾದರೂ ರೂಪಿಸಲಾಗಿದೆಯೇ ?

**ಪರ್ಮಿಟ್ ಇಲ್ಲದ, ತೆರಿಗೆ ವಂಚಿಸಿ ಸಂಚರಿಸುತ್ತಿರುವ**

**ಖಾಸಗಿ ಬಸ್‌ಗಳು**

**ಶ್ರೀ ಎಂ. ಶ್ರೀನಿವಾಸ್ (ವಿಧಾನಸಭೆಯಿಂದ ಚುನಾಯಿತರಾದವರು)** –

೨೩೩ (೧೨೬೨) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮತ್ತು ಹೊರರಾಜ್ಯಗಳಿಗೆ ಚಲಿಸುತ್ತಿರುವ ಸರ್ಕಾರಿ ಮತ್ತು ಅನುಮತಿ ಪಡೆದ ಖಾಸಗಿ ಬಸ್‌ಗಳ ಸಂಚಾರದ ಅಂದಾಜು ಸರ್ಕಾರಕ್ಕಿದೆಯೇ ; ಹಾಗಿದ್ದಲ್ಲಿ, ಪ್ರತ್ಯೇಕ ಮಾಹಿತಿ ಒದಗಿಸುವುದು ;

(ಆ) ಪರ್ಮಿಟ್ ಇಲ್ಲದೆ, ರಸ್ತೆ ತೆರಿಗೆ ಪಾವತಿಸದೆ ಸಂಚರಿಸುತ್ತಿರುವ ಖಾಸಗಿ ಬಸ್‌ಗಳ ಮತ್ತು ಟ್ರಾವೆಲ್ಸ್‌ಗಳ ಅಕ್ರಮವು ಬೆಳಕಿಗೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಅಕ್ರಮದಲ್ಲಿ ಭಾಗಿಯಾದ ಪ್ರಕರಣಗಳು ಎಷ್ಟು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಖಾಸಗಿ ಟ್ರಾವೆಲ್ಸ್‌ಗಳ ಈ ಅಕ್ರಮದಿಂದಾಗಿ ಕೆ.ಎಸ್.ಆರ್.ಟಿ.ಸಿ. ಗೆ ಆದ ನಷ್ಟದ ಅಂದಾಜು ಸರ್ಕಾರಕ್ಕೆ ಇದೆಯೇ ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳು ಏನು ? (ಮಾಹಿತಿ ಒದಗಿಸುವುದು)

**ಬಾಲ ಸಂಜೀವಿನಿ ಯೋಜನೆ**

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು)** –

೨೩೪ (೧೩೦೪) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಆರೋಗ್ಯ ಇಲಾಖೆಯಲ್ಲಿ ಬಾಲ ಸಂಜೀವಿನಿ ಯೋಜನೆಯನ್ನು ಎಂದು ಜಾರಿಗೆ ತರಲಾಯಿತು : ಈ ಯೋಜನೆಯ ರೂಪುರೇಷೆಗಳೇನು ; (ವಿವರ ನೀಡುವುದು)

(ಆ) ಇದುವರೆವಿಗೂ ಈ ಯೋಜನೆಯಲ್ಲಿ ಚಿಕಿತ್ಸೆ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿಯೊಂದಿಗೆ)

(ಇ) ಈ ಯೋಜನೆ ಬಗ್ಗೆ ಸಾರ್ವಜನಿಕ ಅರಿವು ಮೂಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ವಿವರ ನೀಡುವುದು)

**ಸರ್ಕಾರಿ ಆಸ್ಪತ್ರೆಗಳಲ್ಲಿ ನರ್ಸ್‌ಗಳ ಕೊರತೆ**

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೩೫ (೧೨೭೭) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ನರ್ಸ್‌ಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದ ಸರ್ಕಾರಿ ಆಸ್ಪತ್ರೆಗಳಿಗೆ ಮಂಜೂರಾದ ಹುದ್ದೆಗಳೆಷ್ಟು ; ಹಾಲಿ ಇರುವ ಹುದ್ದೆಗಳೆಷ್ಟು ; ಇನ್ನೂ ಅವಶ್ಯವಿರುವ ಹುದ್ದೆಗಳೆಷ್ಟು ; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಈಗಾಗಲೇ, ಸುಮಾರು ೧೦ ವರ್ಷಗಳಿಂದ ಗುತ್ತಿಗೆ ಆಧಾರದ ಮೇಲೆ ಕೆಲಸ ನಿರ್ವಹಿಸುತ್ತಿರುವ ನರ್ಸ್‌ಗಳನ್ನು ಖಾಯಂಗೊಳಿಸಲು ಸರ್ಕಾರಕ್ಕಿರುವ ತೊಂದರೆಗಳೇನು ? (ಪೂರ್ಣ ಮಾಹಿತಿ ನೀಡುವುದು)

**ನಕಲಿ ಪಡಿತರ ಚೀಟಿಗಳು**

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೩೬ (೧೩೦೯) ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ಜಿಲ್ಲೆಯಲ್ಲಿ ಈವರೆಗೆ ಎಷ್ಟು ನಕಲಿ ಪಡಿತರ ಚೀಟಿಗಳಿವೆ ; (ತಾಲ್ಲೂಕುವಾರು ವಿವರಗಳೊಂದಿಗೆ)

(ಆ) ಜಿಲ್ಲೆಯಲ್ಲಿ ವಿತರಣೆಯಾಗಿರುವ ಒಟ್ಟು ಪಡಿತರ ಚೀಟಿಗಳ ಸಂಖ್ಯೆ ಎಷ್ಟು ;

(ಇ) ಈವರೆಗೆ ಎಷ್ಟು ನಕಲಿ ಪಡಿತರ ಚೀಟಿ ವಶಪಡಿಸಿಕೊಂಡು ತಪ್ಪಿತಸ್ಥರ ವಿರುದ್ಧ ಏನು ಕ್ರಮ ಕೈಗೊಳ್ಳಲಾಗಿದೆ ;

(ಈ) ಜಿಲ್ಲೆಯಲ್ಲಿ ಪಡಿತರ ಚೀಟಿದಾರರಿಗೆ ಪಡಿತರ ವಿತರಣೆಯಿಂದ ಸರ್ಕಾರಕ್ಕೆ ಎಷ್ಟು ವೆಚ್ಚವಾಗುತ್ತಿದೆ ;

(ಉ) ಇದರಲ್ಲಿ ನಕಲಿ ಪಡಿತರಿಗೆ ಪಡಿತರ ವಿತರಣೆಯಿಂದ ಸರ್ಕಾರದ ಬೊಕ್ಕಸಕ್ಕೆ ಆಗುತ್ತಿರುವ ನಷ್ಟ ಎಷ್ಟು ?

## ಗ್ರಾಮೀಣ ಭಾಗದಲ್ಲಿ ಸಂಚರಿಸುವ ಬಸ್ಸುಗಳು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

೨೩೭ (೧೨೯೭) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ವತಿಯಿಂದ ಗ್ರಾಮೀಣ ಭಾಗದಲ್ಲಿ ಸಂಚರಿಸುವ ಸಾರಿಗೆ ಬಸ್ಸುಗಳು ಹಳೆಯದಾಗಿದ್ದು, ಅಲ್ಲಲ್ಲಿ ಕೆಟ್ಟು ನಿಲ್ಲುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಬೀದರ್ ಜಿಲ್ಲೆಯ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ, ರೈತರುಗಳಿಗೆ, ರೋಗಿಗಳಿಗೆ ಮತ್ತು ಗ್ರಾಮೀಣ ಜನತೆಗೆ ತೊಂದರೆಯಾಗಿರುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ಹಾಗಿದ್ದಲ್ಲಿ, ಇಂತಹ ಬಸ್ಸುಗಳನ್ನು ಬದಲಾಯಿಸಿ ಸುಮಾರು ಗ್ರಾಮಗಳಿಗೆ ಬಸ್ಸುಗಳ ವ್ಯವಸ್ಥೆ, ಹೊಸ ಬಸ್ಸುಗಳನ್ನು ಓಡಿಸಲು ಸರ್ಕಾರ ಯಾವಾಗ ಕ್ರಮ ತೆಗೆದುಕೊಳ್ಳುವುದು ? (ವಿವರ ನೀಡುವುದು)

## ರಾಜ್ಯದಲ್ಲಿನ ವಿಜ್ಞಾನಿಗಳು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೨೩೮ (೧೩೧೩) ಯೋಜನೆ ಮತ್ತು ಸಾಂಖ್ಯಿಕ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ವಿಜ್ಞಾನಿಗಳ ಸಂಖ್ಯೆ ಎಷ್ಟು ; (ಇವರ ಗುರುತಿಸುವಿಕೆಯ ವಿಧಾನವೇನು)

(ಆ) ಇವರುಗಳು ಈವರೆಗೆ ಮಾಡಿರುವ ಆವಿಷ್ಕಾರ, ಸಂಶೋಧನೆ, ಮತ್ತಿತರ ಸಾಧನಗಳೇನು ; (ವಿಜ್ಞಾನಿವಾರು ವಿವರ ನೀಡುವುದು)

(ಇ) ಇವರ ವೇತನ, ಭತ್ಯೆ, ಸಂಶೋಧನಾ ವೆಚ್ಚ, ಇತ್ಯಾದಿ ವೆಚ್ಚಗಳನ್ನು ಯಾರು ಭರಿಸುತ್ತಾರೆ ;

(ಈ) ಇವರುಗಳ ಸಂಶೋಧನಾ ಕಾರ್ಯಕ್ಕೆ ಸರ್ಕಾರ ಅನುದಾನಗಳನ್ನು ನೀಡುತ್ತಿದೆಯೇ ; ಇದ್ದಲ್ಲಿ, ಎಷ್ಟು ?

## ಗಂಗಾ ಕಲ್ಯಾಣ ಯೋಜನೆ ಫಲಾನುಭವಿಗಳು

**ಶ್ರೀ ಟಿ. ಜಾನ್ (ಸ್ಥಳೀಯ ಸುಸ್ಥೆಗಳ ಕ್ಷೇತ್ರ) –**

೨೩೯ (೧೨೬೩) ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಲ್ಲಿ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಮತ್ತು ಇತರೆ ಫಲಾನುಭವಿಗಳಿಗೆ ಎಷ್ಟು ಕೊಳವೆ ಬಾವಿಗಳು ಮಂಜೂರಾಗಿವೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಮಂಜೂರಾಗಿರುವುದರಲ್ಲಿ ಎಷ್ಟು ಕೊಳವೆ ಬಾವಿಗಳನ್ನು ಕೊರೆಯಲಾಗಿದೆ ; ಎಷ್ಟು ಬಾವಿಗಳಿಗೆ ಮೋಟಾರ್ ಹಾಗೂ ವಿದ್ಯುತ್ ಸಂಪರ್ಕ ಒದಗಿಸಲಾಗಿದೆ ? (ತಾಲ್ಲೂಕುವಾರು ವಿವರ ನೀಡುವುದು)

## ವಿದ್ಯಾರ್ಥಿ ನಿಲಯಗಳು

**ಶ್ರೀ ವೀರಕುಮಾರ್ ಅಪ್ಪಾಸೊ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೪೦ (೧೨೬೫) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾಂ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ನಡೆಯುತ್ತಿರುವ ವಸತಿ ನಿಲಯಗಳು ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ವಸತಿ ನಿಲಯಗಳಿಗೆ ಮಂಜೂರಾದ ಒಟ್ಟು ಹುದ್ದೆ ಹಾಗೂ ಕೊರತೆಯಿರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಇ) ಪ್ರತಿ ವಿದ್ಯಾರ್ಥಿನಿಲಯಗಳಿಗೆ ಮಂಜೂರಾತಿಯಾದ ವಿದ್ಯಾರ್ಥಿ/ ವಿದ್ಯಾರ್ಥಿನಿಯರ ಸಂಖ್ಯೆ ಮತ್ತು ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿ/ ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಪಿ8, ಕಾ.ಸೂ. 343, ಪ್ರತಿಗಳು 1500